ಚಳ್ಳಕೆರೆ ಸಾರ್ವತ್ರಿಕ ಆಸ್ಪತ್ರೆಗಾಗಿ ಸಿಬ್ಬಂದಿಯಂ ನೇಮಕಾತಿ.

೧೫೩೦. ಶ್ರೀ ತಿಪ್ಪೇಸ್ವಾಮಿ (ಚಳ್ಳಕೆರೆ).—ಮಾನ್ಯ ಆರೋಗ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಚಳ್ಳಕೆರೆ ಆಸ್ಪತ್ರೆ ಸಾರ್ವಜನಿಕರ ಆಸ್ಪತ್ರೆಯಾಗಿದ್ದು ಯಾವಾಗ ?

ಆ) ಕಟ್ಟಿಡದ ಕೆಲಸ ಮುಗಿದು ಸಿಬ್ಬಂದಿಯವರನ್ನು ನೇಮಕ ಮಾಡಲು ಸರ್ಕಾರದವರು ಕ್ರಮ ತೆಗೆದುಕೊಳ್ಳುವರೆ ?

ಇ) ಈ ಆಸ್ಪತ್ರೆಗೆ ಈ ವರ್ಷದಲ್ಲಿ ಎಷ್ಟು ಮೊತ್ತದ ಔಷಧಿಯನ್ನು ಒದಗಿಸಲಾಗಿದೆ ?

ಶ್ರೀ ಹೆಚ್. ಎಲ್. ತಿಮ್ಮೇಗೌಡ (ಆರೋಗ್ಯ ಮಂತ್ರಿಗಳು).—

ಅ) ೩೪ ಹಾಸಿಗೆಗಳ ಸಾರ್ವಜನಿಕ ಆಸ್ಪತ್ರೆಯು ೨೮-೦೨-೭೭ ರಂದು ಮಂಜೂರಾಗಿದೆ.

ಆ) ಕೆಳಗಿನ ಹುದ್ದೆಗಳನ್ನು ಈಗಾಗಲೇ ಮಂಜೂರು ಮಾಡಲಾಗಿದೆ.

೧.	ಆರೋಗ್ಯಾಧಿಕಾರಿ ಹಾಗೂ ಸಹಾಯಕ ಶಸ್ತ್ರ ಚಿಕಿತ್ಸಕರು	೧
೨.	ಕಿರಿಯ ಪ್ರಯೋಗಶಾಲಾ ತಂತ್ರಜ್ಞ	೧
೩.	ಔಷಧ ಮಿಶ್ರಕರು	೧

ಉಳಿದ ಹುದ್ದೆಗಳನ್ನು ಮಂಜೂರು ಮಾಡುವ ಪ್ರಶ್ನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ೨೫,೪೦೮-೮೦ ರೂ. ಮೌಲ್ಯದ ಔಷಧಿಯನ್ನು ಒದಗಿಸಲಾಗಿದೆ.

ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಘಟಕಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ.

೧೫೩೧. ಶ್ರೀ ಎಸ್. ಹೆಚ್. ಕೌಜಲಗಿ (ಬೈಲ ಹೊಂಗಲ). —ಮಾನ್ಯ ಆರೋಗ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿ ಪ್ರತಿ ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳ ಸಂಖ್ಯೆ ಎಷ್ಟು ?

ಆ) ಪ್ರತಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳ ಸಂಖ್ಯೆ (ಕ್ಷೇತ್ರವಾರು ವಿವರ ಕೊಡತಕ್ಕದ್ದು.)